## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 160 ಸೇಶಿಕಾ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 16.05.2020.

## ಸುತ್ತೋಲೆ

**ವಿಷಯ :** ಲೋಕೋಪಯೋಗಿ ಇಲಾಖೆ ಹಾಗೂ ಇತರೆ ಇಲಾಖೆಗಳ ವಿವಿಧ ವೃಂದಗಳ ಅಧಿಕಾರಿ / ನೌಕರರುಗಳನ್ನು ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಇಲಾಖೆಗಳಲ್ಲಿ ಖಾಯಂ ಆಗಿ ವಿಲೀನಗೊಳಿಸುವ ಬಗ್ಗೆ - ಮಾರ್ಗಸೂಚಿಗಳು.

* * * *

ಲೋಕೋಪಯೋಗಿ ಇಲಾಖೆಯಲ್ಲಿ ನೇಮಕಾತಿ ಹೊಂದಿರುವ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳನ್ನು ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಹಂಚಿಕೆ ಮಾಡುವ ಕುರಿತು ಮಾನ್ಯ ಉಪ ಮುಖ್ಯ ಮಂತ್ರಿಗಳು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ನಡೆದಿದ್ದು, ಸದರಿ ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಇಚ್ಛಿಸುವ ಕುರಿತು ಅಧಿಕಾರಿ/ ನೌಕರರಿಂದ ಒಬ್ಬರಿಗೆ ಒಂದೇ ಇಲಾಖೆಯ ಆಯ್ಕೆಯ ಅಭಿಮತ ಪಡೆಯುವ ದಿಸೆಯಲ್ಲಿ ಸಂಬಂಧಪಟ್ಟ ಇಲಾಖೆಗಳು ಕ್ರಮ ಕೈಗೊಳ್ಳಬೇಕೆಂದು ತೀರ್ಮಾನಿಸಲಾಗಿರುತ್ತದೆ.

ಅದರನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ (1) ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯಲ್ಲಿ ಮಂಜೂರಾಗಿ ಖಾಲಿಯಿರುವ ಹುದ್ದೆಗಳಿಗೆ ಲೋಕೋಪಯೋಗಿ ಇಲಾಖೆಯ ಅಧಿಕಾರಿ/ನೌಕರರುಗಳು ಹಾಗೂ (2) ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಮಂಜೂರಾಗಿರುವ ಖಾಲಿ ಹುದ್ದೆಗಳ ಎದುರು ಲೋಕೋಪಯೋಗಿ ಇಲಾಖೆ ಹಾಗೂ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗಳ ಅಧಿಕಾರಿ/ ನೌಕರರುಗಳನ್ನು ಶಾಶ್ವತವಾಗಿ ವಿಲೀನಗೊಳಿಸಿಕೊಳ್ಳುವ ಸಲುವಾಗಿ ಅಭಿಮತಗಳನ್ನು ಈಗಾಗಲೇ ಹೊರಡಿಸಿರುವ ಆದೇಶ ಸಂಖ್ಯೆ: ಗ್ರಾಅಪ 160 ಸೇಶಿಕ 2019(1) ದಿನಾಂಕ: 16.5.2020 ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ನಿಯಮ ೨ರನುಸಾರ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹಿಂಪಡೆಯಲಾಗದ (Irrevocable Option) ಅಭಿಮತ ಸಲ್ಲಿಸಲು ಆಸಕ್ತಿ ಹೊಂದಿರುವ ಅಧಿಕಾರಿ/ನೌಕರರುಗಳು ಅಭಿಮತ ಸಲ್ಲಿಸುವ ಪೂರ್ವದಲ್ಲಿ ಈ ಕೆಳಕಂಡ ಅಂಶಗಳನ್ನು ಗಣನೆಗೆ ತೆಗೆದುಕೊಳ್ಳಲು ತಿಳಿಸಲಾಗಿದೆ:

1. ಅಭಿಮತವನ್ನು ಆನ್ ಲೈನ್ ಮೂಲಕ ನಿಗಧಿಪಡಿಸಿರುವ ನಮೂನೆಯಲ್ಲಿ ವಿವರಗಳನ್ನು ಕಡ್ಡಾಯವಾಗಿ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸಲ್ಲಿಸತಕ್ಕದ್ದು. ನಿಗಧಿತ ಅರ್ಜಿ ನಮೂನೆಯನ್ನು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್ ವಿಳಾಸ (rdpr.kar.nic.in) ರಲ್ಲಿ ಲಭ್ಯವಿರುತ್ತದೆ. ನಿಗಧಿ ಪಡಿಸಿದ ದಿನಾಂಕದೊಳಗೆ ಅರ್ಜಿಗಳನ್ನು

ಸಲ್ಲಿಸುವುದು. ನಿಗಧಿತ ಸಮಯದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ;

2. ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ ಮತ್ತು ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಮಂಜೂರಾಗಿ ಖಾಲಿಯಿರುವ ಹುದ್ದೆಗಳಿಗೆ ಮಾತ್ರ ವಿಲೀನಾತಿಗೊಳಿಸಲಾಗುವುದು;

3. ಹಿಂಪಡೆಯಲಾಗದ ಅಭಿಮತಗಳನ್ನು ಮಾತ್ರ ಇಲಾಖೆಗೆ ಕಳುಹಿಸಿ ಮಾತ್ರ ಇಲಾಖೆಯ ಸಹಮತಿ ದೊರೆತ ನಂತರ ವಿಲೀನಾತಿಗೊಳಿಸಲಾಗುವುದು;

4. ವಿಲೀನಾತಿ ಹೊಂದುವ ಅಧಿಕಾರಿ/ನೌಕರರುಗಳ ಸೇವಾ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ಅನುಸಾರ ಸದರಿಯವರುಗಳ ಮಾತ್ರ ಇಲಾಖೆಯಲ್ಲಿನ ಅಂತರ್ ಜೇಷ್ಠತೆಯನ್ನು ಆಧಾರವಾಗಿಟ್ಟುಕೊಂಡು ನಿಗಧಿಪಡಿಸಲಾಗುವುದು; ವಿವಿಧ ಇಲಾಖೆಗಳ ಅಧಿಕಾರಿ/ನೌಕರರುಗಳು ವಿಲೀನಗೊಂಡಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ಅನುಸಾರ ನಿಗಧಿಪಡಿಸಲಾಗುವುದು.

5. ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಈ ಹಿಂದೆ 2008 ಮತ್ತು 2014ನೇ ಸಾಲುಗಳಲ್ಲಿ ಸಲ್ಲಿಸಿದ ಅಭಿಮತಗಳನ್ನು ಪರಿಗಣಿಸಲಾಗುವುದಿಲ್ಲ.

**(ಎಲ್.ಕೆ. ಅತೀಕ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಲೋಕೋಪಯೋಗಿ ಇಲಾಖೆ ಮತ್ತು ಜಲಸಂಪನ್ಮೂಲ ಇಲಾಖೆ.
2. ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
3. ಎಲ್ಲಾ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಮುಖ್ಯ ಇಂಜಿನೀಯರ್, ಪಂ.ರಾ.ಇಂ. ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನೀಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಇಂಜಿನೀಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
7. ಮುಖ್ಯ ಇಂಜಿನೀಯರ್, ಕೇಂದ್ರ ಯಾಂತ್ರಿಕ ಸಂಸ್ಥೆ, ಆನಂದರಾವ್ ಸರ್ಕಲ್, ಬೆಂಗಳೂರು.
8. ಮುಖ್ಯ ಇಂಜಿನೀಯರ್, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ(ದಕ್ಷಿಣ ವಲಯ), ಬೆಂಗಳೂರು.
9. ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಪಂ.ರಾ.ಇಂ. ಇಲಾಖೆ ಎಲ್ಲಾ ಅಧೀಕ್ಷಕ ಅಭಿಯಂತರರು / ಕಾರ್ಯಪಾಲಕ ಅಭಿಯಂತರರು – ತಮ್ಮ ಅಧೀನದಲ್ಲಿ ಬರುವ ಎಲ್ಲಾ ಅಧಿಕಾರಿ / ನೌಕರರ ಗಮನಕ್ಕೆ ತರಲು ತಿಳಿಸಲಾಗಿದೆ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
12. ಶಾಖಾ ರಕ್ಷ ಕಡತ : ಹೆಚ್ಚುವರಿ ಪ್ರತಿ.